ದಿನಾಂಕಃ **06-01-2026** ರಂದು ಸಾಕ್ಷಿಗೆ ಪುನಃ ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲು ಶ್ರೀ ಕೆ.ವಿ.ವೈ ಪರವಾಗಿ ಶ್ರೀ ಹೆಚ್ ಹೆಚ್ ವಕೀಲರಿಂದಃ ಆರೋಪಿ **1** ರವರ ಪರವಾಗಿ

ನಾನು ಪಿಯುಸಿ ಓದಿದ್ದೇನೆ. ದೂರನ್ನು ನಾನೇ ಬರೆದಿರುತ್ತೇನೆ. ಯಾವ ಪೊಲೀಸರು ನನ್ನಿಂದ ದೂರು ಪಡೆದಿದ್ದರು ಎಂದು ನನಗೆ ಈಗ ಹೇಳಲು ಆಗುವುದಿಲ್ಲ. ದೂರು ಕೊಟ್ಟಿದ್ದೇನೆ ಎಂದು ಹೇಳಿದ್ದು ಯಾರು ಕಳ್ಳತನ ಮಾಡಿದ್ದರು ಎಂದು ನಾನು ಹೇಳಿ ಬರೆಸಿಲ್ಲ. ನನಗೆ ಎದುರು ಮನೆ ಕೆಲಸದವರು ಕಳ್ಳತನ ಆಗಿರುವ ವಿಷಯವನ್ನು ತಿಳಿಸಿದರು. ನನಗೆ ಎದುರುಗಡೆ ಮನೆಯವರು ಫೋನ್ ಮಾಡಿ ತಿಳಿಸಿದ್ದರು. ನನಗೆ ದಿಃ **24.07.2022** ರಂದು ಘಟನೆಯ ಬಗ್ಗೆ ತಿಳಿಸಿದ್ದರು. ನಾನು ದಿಃ **25.07.2022** ರಂದು ದೂರು ಕೊಟ್ಟಿರುತ್ತೇನೆ. ಅದೇ ದಿನ ದೂರು ಕೊಡಲು ನನಗೆ ತೊಂದರೆ ಇರಲಿಲ್ಲ.

ಆರೋಪಿಗೂ ಮತ್ತು ಈ ಘಟನೆಗೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಸಹ ನಾನು ಸುಳ್ಳು ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ದಿಃ **26.07.2022** ರಂದು ಮಹಜರ್ ಮಾಡಲು ಬಂದಾಗ ನಾನು ಹೇಳಿಕೆ ಕೊಟ್ಟಿರುತ್ತೇನೆ. ನಾನು ಪೊಲೀಸರ ಮುಂದೆ ಆ ದಿನ ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ನಾನು ಹೇಳಿದಂತೆ ಯಾವುದೇ ಕಳ್ಳತನ ಆಗಿರುವುದಿಲ್ಲ ಮತ್ತು ನಾನು ಆರೋಪಿಗೆ ತೊಂದರೆ ಕೊಡುವ ಉದದ್ದೇಶದಿಂದದೂರುದೂರನ್ನು ಕೊಟ್ಟು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹೇಳಿದಂತೆ ಪೊಲೀಸರು ಸ್ಥಳಕ್ಕೆ ಬಂದಿಲ್ಲ ಮತ್ತು ಸ್ಥಳದಲ್ಲಿ ಯಾವುದೇ ಮಹಜರ್ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯನ್ನು ಪೊಲೀಸರು ನನಗೆ ತೋರಿಸಿರಲಿಲ್ಲ ಮತ್ತು ಆ ರೀತಿ

ತೋರಿಸಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯನ್ನು ಇದೇ ಮೊದಲನೇ ಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ದೂರನ್ನು ಕೊಟ್ಟು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ **2** ರವರ ಪರವಾಗಿಃ ಶ್ರೀ ಬಿ.ಡಿ.ಜೆ ವಕೀಲರು ಕೆ.ವಿ.ವೈ ಪರ ಶ್ರೀ ಹೆಚ್ ಹೆಚ್ ವಕೀಲರ ಪಾಟೀ ಸವಾಲನ್ನೇ ಅಳವಡಿಸಿಕೊಂಡಿರುತ್ತಾರೆ.

ಮರು ವಿಚಾರಣೆ - ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

(ಮೊಹಮ್ಮದ್ ಆರೀಫುಲ್ಲಾ ಸಿ.ಎಫ್)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ
ತಿಪಟೂರು.